**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ 17/2022** **CW-6 PW-5**

**ಸಾಕ್ಷಿಯನ್ನು ದಿಃ 17.12.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ರೂಪ |
| ಗಂಡನ ಹೆಸರುಃ | ನಾಗೇಶ |
| ವಯಸ್ಸುಃ | 35 ವರ್ಷ |
| ವೃತ್ತಿಃ | ಅಬಕಾರಿ ನಿರೀಕ್ಷಕರು |
| ವಾಸ ಸ್ಥಳಃ | ಚನ್ನರಾಯಪಟ್ಟಣ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 28.02.2021 ರಿಂದ 01.01.2025 ರವರೆಗೆ ನಾನು ಚನ್ನರಾಯಪಟ್ಟಣ ಅಬಕಾರಿ ಇಲಾಖೆಯಲ್ಲಿ ಅಬಕಾರಿ ಉಪ ನಿರೀಕ್ಷಕರರಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 15.06.2021 ರಂದು ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-1 ರವರಿಂದ ಪಡೆದು ಪರಿಶೀಲಿಸಿರುತ್ತೇನೆ.

ದಿಃ 16.06.2021 ರಂದು ರಾಸಾಯನಿಕ ಪರೀಕ್ಷೆಗಾಗಿ ಮು ಮಾ -1 ಅಬಕಾರಿ ಪೇದೆ ಚಾಸಾ-5 ರವರೊಂದಿಗೆ ವಿಧಿ ವಿಜ್ಞಾನ ಪರೀಕ್ಷೆಗೆ ಕಳುಹಿಸಿರುತ್ತೇನೆ,.

ದಿಃ 28.06.2021 ರಂದು ಕೃತ್ಯ ನಡೆದ ಸ್ಥಳದ ಮಾಲೀಕತ್ವ ಕೋರಿ ಪಂಚಾಯತಿ ಅಭಿವೃದ್ದಿ ಅಧಿಕಾರಿಯವರಿಗೆ ಮನವಿ ಸಲ್ಲಿಸಿರುತ್ತೇನೆ. ದಿಃ 02.08.2021 ರಂದು ಸದರಿಯವರಿಂದ ಮಾಹಿತಿ ಪಡೆದಿರುತ್ತೇನೆ. ದಿಃ 02.08.2021 ರಂದು ಸ್ಥಳದ ಮಾಲೀಕತ್ವ ಕೋರಿ ಗ್ರಾಮ ಲೆಕ್ಕಾಧಿಕಾರಿಯವರಿಗೆ ಮನವಿ ಸಲ್ಲಿಸಿರುತ್ತೇನೆ. ಅದೇ ದಿನ ಸದರಿಯವರು ಮನವಿಗೆ ಉತ್ತರದೊಂದಿಗೆ ಆರ್ ಟಿ ಸಿ ಸಲ್ಲಿಸಿರುತ್ತಾರೆ.

ಸಾಕ್ಷಿ ದಿಃ 28.06.2021 ರ ಮನವಿ, ದಿಃ 01.07.2021 ಉತ್ತರ, ದಿಃ 02.08.2021 ರ ಮನವಿ, ಗ್ರಾಮ ಲೆಕ್ಕಾಧಿಕಾರಿಯ ಉತ್ತರಗಳನ್ನು ನೋಡಿ ಗುರುತಿಸಿದ್ದು

ಅವುಗಳನ್ನು ನಿಪಿ–11 ರಿಂದ ನಿಪಿ–14 ಎಂದು, ಸಾಕ್ಷಿಯ ಸಹಿಗಳನ್ನು ನಿಪಿ–11(ಎ) ಮತ್ತು ನಿಪಿ–13(ಎ) ಎಂದು ಗುರುತಿಸಲಾಯಿತು.

ದಿಃ 29.07.2021 ರಂದು ಚಾಸಾ–2 ರಿಂದ ಚಾಸಾ–5 ರವರ ಹೇಳಿಕೆ ಪಡೆದಿರುತ್ತೇನೆ. ಚಾಸಾ–2 ಮತ್ತು ಚಾಸಾ–3 ರವರ ಹೇಳಿಕೆಯನ್ನು ನಿಪಿ–7 ಮತ್ತು ನಿಪಿ–9 ರಂತೆ ಪಡೆದಿರುತ್ತೇನೆ. ಅದೇ ದಿನ ಕೃತ್ಯ ನಡೆದ ಸ್ಥಳದ ಮಾಲೀಕರ ಹಾಗೂ ಆರೋಪಿಯ ಹೇಳಿಕೆ ಪಡೆದಿರುತ್ತೇನೆ.

ದಿಃ 03.08.2021 ರಂದು ರಾಸಾಯನಿಕ ವಿಶ್ಲೇಷಣಾ ವರದಿ ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ಸಾಕ್ಷಿ ರಾಸಾಯನಿಕ ವಿಶ್ಲೇಷಣಾ ವರದಿ ಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ–15 ಎಂದು ಗುರುತಿಸಲಾಯಿತು.

ದಿಃ 31.08.2021 ರಂದು ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎ ಆರ್ ಜಿ ವಕೀಲರಿಂದ ಃ**

ಗ್ರಾಮಲೆಕ್ಕಾಧಿಕಾರಿ ಹಾಗೂ ಪಿ ಡಿ ಒ ರವರನ್ನು ಸಾಕ್ಷಿದಾರರನ್ನಾಗಿ ಮಾಡಿಲ್ಲ ಎಂದರೆ ಸರಿ. ಸಾಕ್ಷಿದಾರರನ್ನಾಗಿ ಮಾಡಲು ತೊಂದರೆ ಇರಲಿಲ್ಲ ಎಂದರೆ ಸರಿ. ಸ್ಥಳದ ಮಾಲೀಕರನ್ನು ಸಾಕ್ಷಿದಾರರನ್ನಾಗಿ ಮಾಡಿಲ್ಲ ಎಂದರೆ ಸರಿ. ಸಾಕ್ಷಿದಾರರನ್ನಾಗಿ ಮಾಡಲು ತೊಂದರೆ ಇರಲಿಲ್ಲ ಎಂದರೆ ಸರಿ. ಚಾಸಾ–1 ರವರಿಂದ ಕಡತವನ್ನು ಪಡೆದು ಸುಳ್ಳು ತನಿಖೆಯನ್ನು ಮಾಡಿದ್ದೇನೆ ಎಂದರೆ ಸರಿಯಲ್ಲ. ಸುಳ್ಳು ರಾಸಾಯನಿಕ ವರದಿಯನ್ನು ಪಡೆದಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ 2 ರಿಂದ 5 ರವರ ಹೇಳಿಕೆಯನ್ನು ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ನನ್ನ ತನಿಖೆಯಲ್ಲಿ ಆರೋಪಿಬ ಯಾವುದೇ ಅಪರಾಧ ಮಾಡಿಲ್ಲ ಎಂದು ಕಂಡುಬಂದಿದ್ದರೂ ಇಲಾಖಾ ಅಂಕಿ

ಅಂಶಗಳಿಗೋಸ್ಕರ ಸುಳ್ಳು ತನಿಖೆಯನ್ನು ಮಾಡಿ ಸುಳ್ಳು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ .**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**